ಸಂಖ್ಯೆ:ಜಿಪಂತು/ಅಭಿ/ಎನ್‌ಆರ್‌ಇಜಿಎ/ವಿವ/2020-21

ಜಿಲ್ಲಾ ಪಂಚಾಯತ್ ಕಾರ್ಯಾಲಯ,
ಅಭಿವೃದ್ಧಿ ಶಾಖೆ,
ತುಮಕೂರು, ದಿನಾಂಕ:02.03.2022.

## ಅಧಿಸೂಚನೆ

ಮಾನ್ಯ ಆಯುಕ್ತರು, ಗ್ರಾಮೀಣಾಭಿವೃದ್ಧಿ ಆಯುಕ್ತಾಲಯ, ಗ್ರಾ.ಪಂ.ರಾ.ಇಲಾಖೆ ರವರ ಪತ್ರದ ಸಂಖ್ಯೆ:RDC-EGS/50/2021(E-442252) ದಿನಾಂಕ:04.08.2021 ರಲ್ಲಿ ತುಮಕೂರು ಜಿಲ್ಲೆಯ ಮಹಾತ್ಮಗಾಂಧಿ ನರೇಗಾ ಯೋಜನೆಯಡಿ ತಾಲ್ಲೂಕು ಪಂಚಾಯಿತಿಗಳಿಗೆ ತಲಾ ಒಬ್ಬರು Administrative Assistant ರವರ ಸೇವೆಯನ್ನು ಪಡೆಯಲು ತಿಳಿಸಿರುತ್ತಾರೆ. ಅದರಂತೆ ಮಹಾತ್ಮಗಾಂಧಿ ನರೇಗಾ ಯೋಜನೆಯಡಿ ತಾಲ್ಲೂಕು ಪಂಚಾಯಿತಿಗಳಿಗೆ ತಲಾ ಒಬ್ಬರಂತೆ ಜಿಲ್ಲೆಯಲ್ಲಿ ಒಟ್ಟು 10 Administrative Assistant ರವರ ಸೇವೆಯನ್ನು ಪಡೆಯಲು ಅರ್ಹ ಅಭ್ಯರ್ಥಿಗಳನ್ನು ನಿಯಮಾನುಸಾರ ಆಯ್ಕೆ ಮಾಡಬೇಕಾಗಿರುತ್ತದೆ. ಅದರಂತೆ, ಹೊರಗುತ್ತಿಗೆ ಸಂಸ್ಥೆಯಾದ ಮೆ|| ಇನ್‌ವೆನ್ಸಿಸ್ ಟೆಕ್ನಾಲಜೀಸ್, ಪ್ರೈವೇಟ್ ಲಿಮಿಟೆಡ್, ಬಸವನಗುಡಿ, ಬೆಂಗಳೂರು-560004 ರವರಿಂದ ಈ ಕೆಳಕಾಣಿಸಿದ ಸಂಖ್ಯೆಯ ಹುದ್ದೆಗಳನ್ನು ಮಹಾತ್ಮಗಾಂಧಿ ನರೇಗಾ ಯೋಜನೆಯ ಅನುಷ್ಠಾನಕ್ಕಾಗಿ ಹೊರಗುತ್ತಿಗೆ ಆಧಾರದ ಮೇಲೆ ಭರ್ತಿ ಮಾಡಲು ಅರ್ಹ ಅಭ್ಯರ್ಥಿಗಳಿಂದ ಆನ್ ಲೈನ್ (http://tumkurzillapanchayat.gov.in ವೆಬ್‌ಸೈಟ್) ಮೂಲಕ ಈ ಕೆಳಕಂಡ ಮಾರ್ಗಸೂಚಿಗಳಂತೆ ಅರ್ಜಿಗಳನ್ನು ಆಹ್ವಾನಿಸಿದೆ.

**ದಿನಾಂಕ : 14.03.2022 ರಿಂದ 31.03.2022 ರೊಳಗೆ ಅರ್ಜಿ ಸಲ್ಲಿಸಬಹುದಾಗಿರುತ್ತದೆ.**

**ಮಾರ್ಗಸೂಚಿಗಳು:**

1. Administrative Assistant ಹುದ್ದೆಗಳಿಗೆ ಆನ್ ಲೈನ್ ನಲ್ಲಿ ಸಲ್ಲಿಸಿದ ಅರ್ಜಿಗಳನ್ನು ಮಾತ್ರ ಪರಿಗಣಿಸಲಾಗುವುದು.
2. **ವಿದ್ಯಾರ್ಹತೆ :** ಕಡ್ಡಾಯವಾಗಿ ಬಿ.ಕಾಂ ಪದವಿದರರು ಮಾತ್ರ ಅರ್ಜಿಯನ್ನು ಸಲ್ಲಿಸತಕ್ಕದ್ದು ಹಾಗೂ ಕನ್ನಡ ಮತ್ತು ಇಂಗ್ಲೀಷ್ ಟೈಪಿಂಗ್ ನಲ್ಲಿ ಪರಿಣತಿ ಹೊಂದಿರತಕ್ಕದ್ದು.
3. MS word, MS Excel, PPT, ಸೇರಿದಂತೆ ಉತ್ತಮ ಕಂಪ್ಯೂಟರ್ ಜ್ಞಾನ ಹೊಂದಿರಬೇಕು.
4. ಅಭ್ಯರ್ಥಿಯು ಅರ್ಜಿ ಸಲ್ಲಿಸಲು ಗರಿಷ್ಠ 45 ವರ್ಷದೊಳಗಿರಬೇಕು. (ಅರ್ಜಿ ಸಲ್ಲಿಸುವ ಅಭ್ಯರ್ಥಿಯು ದಿನಾಂಕ:31.03.2022 ಕ್ಕೆ 45 ವರ್ಷ ಮೀರಿರಬಾರದು)
5. ಆನ್ ಲೈನ್ ನಲ್ಲಿ ಅರ್ಜಿ ಸಲ್ಲಿಸುವಾಗ ಛಾಯಾ ಚಿತ್ರ ಹಾಗೂ ಅಗತ್ಯ ದಾಖಲಾತಿಗಳನ್ನು, ಅಪ್ ಲೋಡ್ ಮಾಡಬೇಕು.

**ಆಯ್ಕೆ ವಿಧಾನ :**

1. ನಿಗಧಿಪಡಿಸಿದ ವಿದ್ಯಾರ್ಹತೆಗೆ ಅನುಗುಣವಾಗಿ ಮೆರಿಟ್ ಪಟ್ಟಿ ತಯಾರಿಸಿ, ಮೆರಿಟ್ ಪಟ್ಟಿಯಲ್ಲಿನ ಅಭ್ಯರ್ಥಿಗಳಿಗೆ ಟೈಪಿಂಗ್ ಮತ್ತು ಕಂಪ್ಯೂಟರ್ ಜ್ಞಾನ ಹೊಂದಿರುವ ಬಗ್ಗೆ ಪ್ರಾಯೋಗಿಕ ಪರೀಕ್ಷೆ ಮೂಲಕ ಮಾನವ ಸಂಪನ್ಮೂಲ ಸಂಸ್ಥೆ ಮೂಲಕ ಸೇವೆಯನ್ನು ಪಡೆಯಲಾಗುವುದು.

ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ,
ಜಿಲ್ಲಾ ಪಂಚಾಯತ್, ತುಮಕೂರು.